**All India Radio: Bangalore**
**Regional Bulletin In Kannada**
**20.02.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**20.02.2026 / 2.30 p.m.**

**<><><><>**

ಮುಖ್ಯಾಂಶಗಳು

1. ಬಾಗಲಕೋಟೆಯಲ್ಲಿ ಕಲ್ಲು ತೂರಾಟ ಪ್ರಕರಣ ; ೮ ಮಂದಿ ಬಂಧನ ; ಶಾಂತಿ ಕಾಪಾಡುವಂತೆ ಮುಖ್ಯಮಂತ್ರಿ ಮನವಿ
2. ಆರ್ಥಿಕ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಯ-ವ್ಯಯ ಪೂರ್ವ ಸಮಾಲೋಚನೆ
3. ಕಲಬುರಗಿಯಲ್ಲಿ ಬೀದಿನಾಯಿ ಕಡಿತದಿಂದ ಐದು ಮಕ್ಕಳಿಗೆ ಗಾಯ ; ಸ್ಥಳೀಯರಿಂದ ಪುರಸಭೆಗೆ ಮುತ್ತಿಗೆ ಹಾಕಿ ಅಸಮಾಧಾನ
4. ಬಂಡೀಪುರದಲ್ಲಿ ಸಫಾರಿ ಆರಂಭಕ್ಕೆ ಯಾವುದೇ ಆದೇಶ ಬಂದಿಲ್ಲ ; ಹುಲಿ ಸಂರಕ್ಷಿತಾ ಪ್ರದೇಶದ ನಿರ್ದೇಶಕ ಪ್ರಭಾಕರನ್ ಸ್ಪಷ್ಟನೆ
5. ಇದೇ ೨೪ರಂದು ಹುಬ್ಬಳ್ಳಿಯಲ್ಲಿ ಕರ್ನಾಟಕ-ಜಮ್ಮು ಕಾಶ್ಮೀರ ನಡುವೆ ರಣಜಿ ಫೈನಲ್ ಪಂದ್ಯ ; ಕೆಎಸ್‌ಸಿಎ ಅಧಿಕಾರಿಗಳಿಂದ ಪರಿಶೀಲನೆ

<><><><>

ಬಾಗಲಕೋಟೆಯಲ್ಲಿ ಶಿವಾಜಿ ಜಯಂತಿ ಮೆರವಣಿಗೆ ವೇಳೆ ಸಂಭವಿಸಿದ ಕಲ್ಲು ತೂರಾಟಕ್ಕೆ ಸಂಬಂಧಿಸಿದಂತೆ ಪೊಲೀಸರು ೮ ಮಂದಿಯನ್ನು ಬಂಧಿಸಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ನಗರದಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ ಎಂದು ಬಾಗಲಕೋಟೆ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್ ತಿಳಿಸಿದ್ದಾರೆ. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ಘಟನೆಯು ಸಮಾಜದ ಶಾಂತಿ, ಸೌಹಾರ್ದತೆಗೆ ಮಾರಕವಾಗಿದೆ. ಹಿರಿಯ ಪೊಲೀಸ್ ಅಧಿಕಾರಿಗಳ ಬಳಿ ಘಟನೆ ಕುರಿತಂತೆ ಚರ್ಚಿಸಿ ನಿಷ್ಪಕ್ಷಪಾತ ತನಿಖೆ ನಡೆಸುವಂತೆ ಸೂಚಿಸಲಾಗಿದೆ ಎಂದು ಹೇಳಿದ್ದಾರೆ. ಪ್ರಕರಣದ ಸಂಬಂಧ ಕೆಲ ಆರೋಪಿಗಳನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಲಾಗುತ್ತಿದ್ದು, ಘಟನೆಗೆ

ಕಾರಣರಾದ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಸಾರ್ವಜನಿಕರು ಯಾವುದೇ ಪ್ರಚೋದನೆಗಳಿಗೆ ಕಿವಿಗೊಡದೆ ಸಂಯಮದಿಂದ ವರ್ತಿಸುವಂತೆ ಮನವಿ ಮಾಡಿದ್ದಾರೆ.

<><><><>

ಬಾಗಲಕೋಟೆಯಲ್ಲಿ ಶಿವಾಜಿ ಜಯಂತಿ ಮೆರವಣಿಗೆಯ ಸಂದರ್ಭದಲ್ಲಿ ನಡೆದ ಕಲ್ಲು ತೂರಾಟದ ಬಗ್ಗೆ ಬಿಜೆಪಿ ಅಸಮಾಧಾನ ವ್ಯಕ್ತಪಡಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಈ ಘಟನೆ ಅತ್ಯಂತ ಖಂಡನೀಯ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ದೂರಿದ್ದಾರೆ. ಪೊಲೀಸರ ಸಮ್ಮುಖದಲ್ಲಿ ಕಲ್ಲು ತೂರಾಟ ನಡೆದಿದ್ದು, ರಾಜ್ಯದ ನಾಗರಿಕರಿಗೆ ಸುರಕ್ಷತೆ ಎಲ್ಲಿದೆ ಎಂದು ಪ್ರಶ್ನಿಸಿದ್ದಾರೆ.

<><><><>

ಮಾರ್ಚ್ ೬ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ೨೦೨೬-೨೭ನೇ ಸಾಲಿನ ಆಯ-ವ್ಯಯ ಮಂಡಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಆರ್ಥಿಕ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಆಯ-ವ್ಯಯ ಪೂರ್ವ ಚರ್ಚೆ ನಡೆಸುತ್ತಿದ್ದಾರೆ. ಸಭೆಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದಾರೆ.

ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೃಷಿ, ಸಹಕಾರ, ಕೈಗಾರಿಕೆ, ರೇಷ್ಮೆ ಸೇರಿದಂತೆ ಹಲವು ಇಲಾಖೆ ಅಧಿಕಾರಿಗಳೊಂದಿಗೆ ಹಾಗೂ ಸಚಿವರೊಂದಿಗೆ ಚರ್ಚೆ ನಡೆಸಿದ್ದಾರೆ. ವಾಣಿಜ್ಯೋದ್ಯಮಿಗಳು ಹಾಗೂ ರೈತರೊಂದಿಗೂ ಬಜೆಟ್ ಪೂರ್ವ ಸಮಾಲೋಚನೆ ನಡೆಸಿದ್ದಾರೆ.

<><><><>

ಕಲಬುರಗಿ ನಗರದ ದೇವಿನಗರ ಪ್ರದೇಶದಲ್ಲಿ ಮನೆಗಳ ಮುಂದೆ ಆಟವಾಡುತ್ತಿದ್ದಾಗ ಐದು ಮಕ್ಕಳಿಗೆ ಬೀದಿ ನಾಯಿ ಕಚ್ಚಿದ ಘಟನೆ ನಡೆದಿದೆ. ಮಕ್ಕಳ ಕಣ್ಣು, ಕಿವಿ ಮತ್ತು ಎದೆಗೆ ಗಂಭೀರ ಗಾಯಗಳಾಗಿದ್ದು ಗುಲ್ಬರ್ಗ ಮೆಡಿಕಲ್ ಕಾಲೇಜು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿಮಾಡಿದೆ. ನಗರದಲ್ಲಿ ನಾಯಿಗಳ ಹಾವಳಿಯನ್ನು ತಡೆಯಲು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಸ್ಥಳೀಯರು ಪ್ರತಿಭಟನೆ ನಡೆಸಿ ಪುರಸಭೆ

ಕಚೇರಿಗೆ ಮುತ್ತಿಗೆ ಹಾಕಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬೀದಿ ನಾಯಿಗಳ ಹಾವಳಿಯನ್ನು ನಿಯಂತ್ರಿಸಲು ವಿಫಲವಾಗಿರುವ ಪುರಸಭೆ ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><>

ಯಾವುದೇ ದೇಶ ಸಮಕಾಲಿನ ಮತ್ತು ಪ್ರಸ್ತುತ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳದಿದ್ದರೆ, ಹಿನ್ನಡೆ ಅನುಭವಿಸುವುದು ಸಾಮಾನ್ಯ ಎಂದು ಇಸ್ರೋ ಮಾಜಿ ಅಧ್ಯಕ್ಷ ಎ.ಎಸ್. ಕಿರಣ್‌ಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

ಕೇಂದ್ರ ರೇಷ್ಮೆ ಮಂಡಳಿ ಆಯೋಜಿಸಿದ್ದ ಕೈಗಾರಿಕೆ ಸಂಬಂಧಿತ ವರ್ಗದೊಂದಿಗೆ ಸಂವಾದ ಕಾರ್ಯಕ್ರಮ ಸೇರಿ-ಸೇತು ಕುರಿತು ಮಾತನಾಡಿದ ಅವರು, ೧೯೭೫ರಲ್ಲಿ ಅಮೆರಿಕದ ಉಪಗ್ರಹ ಬಳಸಿ ಟೆಲಿವಿಷನ್ ಪ್ರಸಾರ ಸೇವೆ ಆರಂಭಿಸುವಲ್ಲಿ ಸಹಕಾರಿಯಾದ ಇಸ್ರೋ ೨೦೨೫ರಲ್ಲಿ ಅಮೆರಿಕದೊಂದಿಗೆ ಸೇರಿ ಅತ್ಯಾಧುನಿಕ 'ನಿಸ್ಸಾರ್' ಭೂಸಂವೇಧಿ  ಉಪಗ್ರಹವನ್ನು ಅಭಿವೃದ್ಧಿಪಡಿಸಿ ಕಕ್ಷೆಗೆ ತಲುಪಿಸುವಲ್ಲಿ ಯಶಸ್ವಿಯಾಯಿತು ಎಂದು ಹೇಳಿದರು. ಇದೇ ರೀತಿ ಕೇಂದ್ರೀಯ ರೇಷ್ಮೆ ಮಂಡಳಿ ಆಧುನಿಕ ತಂತ್ರಜ್ಞಾನಗಳನ್ನು ಅನ್ವೇಷಿಸುವ ಪ್ರಯತ್ನ ನಡೆಸಿದೆ. ನ್ಯಾನೊ ಸೂಕ್ಷ್ಮ ಅಂಶಗಳನ್ನು ರೇಷ್ಮೆ ಹುಳುವಿನಲ್ಲಿ ಸೇರಿಸಿ ೩ ರಿಂದ ೭ ಪಟ್ಟು ಸುಧಾರಿತ ರೇಷ್ಮೆ ನೂಲನ್ನು ಪಡೆಯುವ ತಂತ್ರಜ್ಞಾನವನ್ನು ಅಭಿವೃದ್ಧಿ ಪಡಿಸುತ್ತಿದೆ ಎಂದು ತಿಳಿಸಿದರು. ಕೃತಕ ಬುದ್ಧಿಮತ್ತೆ, ಕ್ವಾಂಟಮ್ ಕಂಪ್ಯೂಟಿಂಗ್ ಬಳಸಿ ಆಧುನಿಕ ತಂತ್ರಜ್ಞಾನಗಳನ್ನು ಅಭಿವೃದ್ಧಿ ಪಡಿಸಲಿ ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಕೃಷಿ ನಿರ್ವಹಣೆಯ ನಿರ್ದೇಶಕರಾದ ಎಸ್.ಸೆಂಥಿಲ್ ವಿನಯಾಘಂ, ರೇಷ್ಮೆ ಸಂಸ್ಕರಣೆಯಲ್ಲಿ ಕೃತಕ ಬುದ್ಧಿಮತ್ತೆ ಮತ್ತು ಸೆನ್ಸಾರ್ ಬಳಕೆ ಆಗಬೇಕು. ಮಂಡಳಿಯು ೭೦ ಪೇಟೆಂಟ್‌ಗಳನ್ನು ಪಡೆದಿದ್ದು, ರೈತರು ಮತ್ತು ಕೈಗಾರಿಕೆಗಳಿಗೆ ಇದರ ಪ್ರಯೋಜನ ಆಗಬೇಕೆಂದು ತಿಳಿಸಿದರು.

<><><>

ಬಂಡೀಪುರದಲ್ಲಿ ವನ್ಯಜೀವಿ ಸಫಾರಿ ಪುನಾರಂಭಕ್ಕೆ ಇಲಾಖೆಯಿಂದ ಯಾವುದೇ ಆದೇಶ ಬಂದಿಲ್ಲ ಎಂದು ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಪ್ರಭಾಕರನ್ ಸ್ಪಷ್ಟಪಡಿಸಿದ್ದಾರೆ. ಗುಂಡ್ಲುಪೇಟೆ ತಾಲೂಕಿನ ಬಂಡೀಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆದೇಶ ಬಂದ ಬಳಿಕ  ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಮಾನವ ವನ್ಯಜೀವಿ

ಸಂಘರ್ಷ ಹಿನ್ನೆಲೆಯಲ್ಲಿ ರೈತರ ಮನವಿ ಮೇರೆಗೆ ಕಳೆದ ನವೆಂಬರ್ ೭ರಿಂದ ಬಂಡೀಪುರದಲ್ಲಿ ವನ್ಯಜೀವಿ ಸಫಾರಿಗೆ ನಿರ್ಬಂಧ ಹೇರಲಾಗಿತ್ತು. ಸಫಾರಿ ಪುನಾರಂಭ ಕುರಿತು ವಾಹನಗಳ ಬಳಕೆ, ಸಮಯ ನಿಗದಿ ಬಗ್ಗೆ ಇನ್ನೂ ಆದೇಶ ನೀಡಿಲ್ಲದ ಕಾರಣ ಸಫಾರಿ ಪುನಾರಂಭಗೊಳಿಸಿಲ್ಲ ಎಂದು ತಿಳಿಸಿದ್ದಾರೆ.

**ಧ್ವನಿ : ಪ್ರಭಾಕರನ್**

<><><><>

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಸಂಬಂಧಿಸಿದಂತೆ ಕೇಂದ್ರ ಚುನಾವಣಾ ಆಯೋಗವು ಯಾವುದೇ ಕ್ಷಣದಲ್ಲಾದರೂ ದಿನಾಂಕ ಘೋಷಿಸಬಹುದು. ಈ ನಿಟ್ಟಿನಲ್ಲಿ ಜಿಲ್ಲಾಡಳಿತವು ಚುನಾವಣಾ ಪೂರ್ವ ಸಿದ್ಧತೆಗಳನ್ನು ಪೂರ್ಣಗೊಳಿಸಿದೆ" ಎಂದು ಜಿಲ್ಲಾಧಿಕಾರಿ ಡಾ. ಜಿ.ಎಂ. ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಆಯೋಗದಿಂದ ಅಧಿಸೂಚನೆ ಹೊರಬಿದ್ದ ತಕ್ಷಣವೇ ಮಾದರಿ ನೀತಿ ಸಂಹಿತೆ ಜಾರಿಗೆ ಬರಲಿದ್ದು, ಆ ನಿಟ್ಟಿನಲ್ಲಿ ಸಿಬ್ಬಂದಿಗ ತರಬೇತಿ ನೀಡಲಾಗುತ್ತಿದೆ ಎಂದು ಹೇಳಿದ್ದಾರೆ.

<><><><>

ಇದೇ ೨೪ರಂದು ಹುಬ್ಬಳ್ಳಿಯ ರಾಜ್‌ನಗರ ಕೆಎಸ್‌ಸಿಎ ಮೈದಾನದಲ್ಲಿ ಕರ್ನಾಟಕ ಮತ್ತು ಜಮ್ಮು-ಕಾಶ್ಮೀರ ತಂಡಗಳ ನಡುವೆ ಐತಿಹಾಸಿಕ ರಣಜಿ ಫೈನಲ್ ಪಂದ್ಯ ನಡೆಯಲಿದೆ. ಅಂತಾರಾಷ್ಟ್ರೀಯ ಗುಣಮಟ್ಟದ ಈ ಕ್ರೀಡಾಂಗಣದಲ್ಲಿ ರಣಜಿ ಫೈನಲ್ ಪಂದ್ಯ ನಡೆಯುತ್ತಿರುವುದು ಇದೇ ಮೊದಲು. ಐದು ದಿನಗಳ ಕಾಲ ರಣಜಿ ಪಂದ್ಯ ನಡೆಯಲಿದ್ದು, ಎಲ್ಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ ವಕ್ತಾರ ವಿನಯ್ ಮೃತ್ಯುಂಜಯ್ ತಿಳಿಸಿದ್ದಾರೆ. ಕಳೆದ ವರ್ಷ ಐಪಿಎಲ್ ಪಂದ್ಯದ ಗೆಲುವಿನ ಸಂಭ್ರಾಮಚರಣೆ ಸಂದರ್ಭದಲ್ಲಿ ಉಂಟಾದ ಅವಘಡದ ಬಳಿಕ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣವು ದೇಶೀಯ, ಅಂತಾರಾಷ್ಟ್ರೀಯ ಐಪಿಎಲ್ ಪಂದ್ಯಗಳನ್ನು ಆಯೋಜಿಸಲು ಸರ್ಕಾರಗಳಿಂದ ಷರತ್ತು ಬದ್ಧ ಅನುಮೋದನೆ ಪಡೆದುಕೊಂಡಿದೆ. ಇದರ ಹೊರತಾಗಿಯೂ ರಣಜಿ ಫೈನಲ್ ಪಂದ್ಯವನ್ನು ಹುಬ್ಬಳ್ಳಿಯಲ್ಲಿ ಆಯೋಜಿಸಲು ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ನೇತೃತ್ವದ ಸಮಿತಿ ನಿರ್ಧರಿಸಿದೆ. ಈಗಾಗಲೇ ಬೆಂಗಳೂರಿನಿಂದ ಆಗಮಿಸಿರುವ ಕೆಎಸ್‌ಸಿಎ ಅಧಿಕಾರಿಗಳು ಮೈದಾನದ ಪರಿಶೀಲನೆ ನಡೆಸಿದ್ದಾರೆ.

<><><><>

ಇಂದು ಸಂತ ಕವಿ ಸರ್ವಜ್ಞ ಜಯಂತಿಯನ್ನು ರಾಜ್ಯಾದ್ಯಂತ ಆಚರಿಸಲಾಗುತ್ತಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ತನ್ನ ವಚನಗಳ ಮೂಲಕ ಸರಳತೆ, ಸಜ್ಜನಿಕೆ, ಸಮಾನತೆ ಮುಂತಾದ ಜೀವನ ಕೌಶಲ್ಯಗಳನ್ನು ಸಾರಿ ಸಮಾಜಕ್ಕೆ ಸುಧಾರಣೆಯ ಹಾದಿ ತೋರಿದ ದಾರ್ಶನಿಕ ಕವಿ ಸರ್ವಜ್ಞ ಎಂದು ಸ್ಮರಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಸಂತ ಕವಿ ಸರ್ವಜ್ಞ ಜಯಂತಿ ಆಚರಿಸಲಾಯಿತು. ಶಾಸಕ ಧೀರಜ್ ಮುನಿರಾಜು ಸರ್ವಜ್ಞ ಭಾವಚಿತ್ರಕ್ಕೆ ನಮನ ಸಲ್ಲಿಸಿ, ಸರ್ವಜ್ಞ ವಚನಗಳ ಸಾರವನ್ನು ಇಂದಿನ ಪೀಳಿಗೆಗೆ ಪರಿಚಯಿಸಬೇಕಾದ ಅಗತ್ಯವಿದೆ ಎಂದು ತಿಳಿಸಿದ್ದಾರೆ.

<><><><>

ರೈತರಿಗೆ ಗನ್ ಪರವಾನಗಿ ನೀಡುವ ಹಾಗೂ ನವೀಕರಣ ಪ್ರಕ್ರಿಯೆಯಲ್ಲಿ ಉಂಟಾಗುತ್ತಿರುವ ವಿಳಂಬವನ್ನು ನಿವಾರಿಸಲು ಶೀಘ್ರದಲ್ಲೇ ಆನ್‌ಲೈನ್ ವ್ಯವಸ್ಥೆ ಜಾರಿಗೊಳಿಸಲಾಗುವುದು ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>